(ಅನುಬಂಧ–1) (ಭಾಗ–II)

4. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಶ್ರೀ ಟಿ.ಬಿ. ಜಯಚಂದ (ಕಾನೂನು ಮತ್ತು ಪಶುಸಂಗೋಪನಾ ಸಚಿವರು) (ಮಾನ್ಯ ಮುಖ್ಯಮಂತ್ರಿಗಳ ಪರವಾಗಿ):– ಮಾನ್ಯ ಅಧ್ಯಕ್ಷರೆ, ಭಾರತದ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ 31ನೇ ಮಾರ್ಚ್ 2013ಕ್ಕೆ ಕೊನೆಗೊಂಡ ವರ್ಷಕ್ಕೆ ಭಾರತದ ಲೆಕ್ಕ ನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು ನೀಡಿರುವ ಸ್ಥಳೀಯ ಸಂಸ್ಥೆಗಳ ವರದಿ (ಸಂಖ್ಯೆ–5)ಯನ್ನು ಸಭೆಯ ಮುಂದಿಡುವುದು.

ಅಧ್ಯಕ್ಷರು: ಮಂಡಿಸಲಾಗಿದೆ.

ಶಾಸನ ರಚನೆ

ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

ಅಧ್ಯಕ್ಷರು: ಕರ್ನಾಟಕ ಕೆರೆ ಅಭಿವೃದ್ಧಿ ಪ್ರಾಧಿಕಾರ ವಿಧೇಯಕ, 2014.

ಶ್ರೀ ಸಿ.ಟಿ. ರವಿ: ಮಾನ್ಯ ಅಧ್ಯಕ್ಷರೆ, ಈಗಾಗಲೇ ಆ ಬಿಲ್ ಅನ್ನು ಮಂಡಿಸಿದ್ದಾರೆ. ಇದೊಂದು ಒಳ್ಳೆಯ ಬಿಲ್ ಚರ್ಚೆಗೆ ನಾಳೆ ತೆಗೆದುಕೊಳ್ಳಿ.

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ: ಇದೊಂದು ಒಳ್ಳೆಯ ಬಿಲ್, ಎಲ್ಲರ ಸಲಹೆ ಸೂಚನೆಗಳನ್ನು ಸೇರಿಸಿಕೊಂಡು ಮಾಡಬಹುದು. ಹೀಗಾಗಿ ನಾಳೆ ಚರ್ಚೆಗೆ ಅವಕಾಶ ಕೊಡಿ.

ಅಧ್ಯಕ್ಷರು: ಆಯಿತು. ಈಗ ಶೂನ್ಯವೇಳೆ.